**ಪಿ.ಡಬ್ಲ್ಯು-01**

**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

**ಓ.ಎಸ್ ಸಂಖ್ಯೆ: 125 /2023**

| | | |
|---|---|---|
| ಸಾಕ್ಷಿದಾರರ ಹೆಸರು | : | ರಾಜನಾಯಕ |
| ತಂದೆಯ ಹೆಸರು | : | ನಂಜುಂಡನಾಯಕ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ವ್ಯವಸಾಯ ಮತ್ತು ವ್ಯಾಪಾರ |
| ವಾಸಸ್ಥಳ | : | ಮಲ್ಲುಪುರ ಗ್ರಾಮ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕ 23.01.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ವಾದಿ ಪರ ಶ್ರೀ ಎಸ್.ಎನ್.ಎಸ್, ವಕೀಲರಿಂದ:**

ನಾನು ಈ ಪ್ರಕರಣದಲ್ಲಿ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ದಿನಾಂಕ 30.06.2021ರ ನೋಂದಾಯಿತ ಕ್ರಯದ ಕರಾರುಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ-1 ಎಂದು ಗುರುತಿಸಲಾಯಿತು.

ಲೀಗಲ್ ನೋಟಿಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ-2 ಎಂದು ಗುರುತಿಸಲಾಯಿತು.

ಎರಡು ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ-3 ಮತ್ತು 4 ಎಂದು ಗುರುತಿಸಲಾಯಿತು.

ಎರಡು ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ-5 ಮತ್ತು 6 ಎಂದು ಗುರುತಿಸಲಾಯಿತು.

ಮೂರು ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ-7 ರಿಂದ 9 ಎಂದು ಗುರುತಿಸಲಾಯಿತು.

**ಪಾಟಿ ಸವಾಲು: ಪ್ರತಿವಾದಿಗಳ ಪರ ವಕೀಲರು ಸಮಯ ಕೋರಿರುತ್ತಾರೆ.** ಆದರೆ **ಯಾವುದೇ ಲಿಖಿತ ಹೇಳಿಕೆ ಸಲ್ಲಿಸಿರುವುದಿಲ್ಲ. ಆದ್ದರಿಂದ ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,**
**ನಂಜನಗೂಡು.**